ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ಕಾರ್ಯಾಲಯ ನಾಡಕಛೇರಿ ಕೊಟ್ಟೂರು

ಸಂ/ಕಂ/ಹ.ಬ./ನಾಕಕೊ/28/2016-17. ದಿನಾಂಕ:09-08-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಎ.ನಾಗಪ್ಪ ತಂದೆ ಲೇಟ್ ಅಡ್ಡೇಪ್ಪರ ನಾಗಪ್ಪ<br>2)ಎ.ತಿಪ್ಪಣ್ಣ ತಂದೆ ಲೇಟ್ ಎ.ನಾಗಪ್ಪ<br>ಕಾಳಾಪುರ ಗ್ರಾಮ ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಕೊಟ್ಟೂರು |
| ಕೂಡ್ಲಿಗಿ ತಾಲೂಕು ಕಾಳಾಪುರ ಗ್ರಾಮದ ಸನಂ 307ಬಿ/2. 332ಬಿ. ವಿಸ್ತೀರ್ಣ 1-96. 1-62. ಎಕ್ರೆ ಜಮೀನುಗಳನ್ನು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಕಾಳಾಪುರ ಗ್ರಾಮದ ಸನಂ 307ಬಿ/2. 332ಬಿ. ವಿಸ್ತೀರ್ಣ 1-96. 1-62. ಎಕ್ರೆ ಜಮೀನುಗಳನ್ನು ಸದರಿ ಗ್ರಾಮದ ಎ.ನಾಗಪ್ಪ ತಂದೆ ಲೇಟ್ ಅಡ್ಡೇಪ್ಪರ ನಾಗಪ್ಪ ಇವರು ದಿನಾಂಕ: 21-04-2013 ರ ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಕಾಳಾಪುರ ಇವರು ನಮೂನೆ-21 ನೋಟಿಸನ್ನು ದಿನಾಂಕ 17-10-2015. ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಇನ್ನಿತರೇ ವಾರಸುದಾರರ ನಮೂನೆ-21 ಕ್ಕೆ ಸಹಿ ಮಾಡಿಲ್ಲದ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 14/2015-16. ದಿನಾಂಕ 18-11-2015 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸು ನೀಡಿ ದಿನಾಂಕ 21-06-2016 ರಿಂದ 09-08-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಗೈರು ಹಾಜರಾಗಿರುತ್ತಾರೆ. ಅರ್ಜಿದಾರರು ಕಾಳಾಪುರ ಗ್ರಾಮದ ಸನಂ 307ಬಿ/2. 332ಬಿ. ವಿಸ್ತೀರ್ಣ 1-96. 1-62. ಎಕ್ರೆ ಜಮೀನುಗಳು ನನ್ನ ತಮ್ಮನಾದ ಎ.ತಿಪ್ಪಣ್ಣ ತಂದೆ ಎ.ನಾಗಪ್ಪ ಇವರ ಹೆಸರಲ್ಲಿ ಲೆಕ್ಕ ದಾಖಲೆ ಇರುತ್ತದೆಯೇಂದು ನಾವುಗಳು ದಿನಾಂಕ 17-10-2015 ರಂದು ಪಾಲು ವಿಭಾಗದ ಪತ್ರ ಬರೆಯಿಸಿರುತ್ತೇವೆ. ಸದರಿ ಪಾಲು ವಿಭಾಗದ ಪತ್ರ ಪ್ರಕಾರ ಸದರಿ ಜಮೀನುಗಳು ನನ್ನ ಹಿಸ್ಯಾಕ್ಕೆ ಬಂದಿರುವ ಕಾರಣ ಸದರಿ ಪಾಲು ವಿಭಾಗದ ಪತ್ರದಂತೆ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ವಿಚಾರಣೆಗೆ ಗೈರು ಹಾಜರಾಗಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನುಗಳ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಕೋರಿಕೆಯನ್ವಯ ಹಕ್ಕು ಬದಲಾವಣೆಗೆ ಯಾವ ಆಕ್ಷೇಪಣೆಗಳು ಸ್ವೀಕೃತಿಯಾಗಿಲ್ಲದ್ದರಿಂದ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

ಮು.ತಿ.ನೋ:-2

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಕಾಳಾಪುರ ಗ್ರಾಮದ ಸನಂ 307ಬಿ/2. 332ಬಿ. ವಿಸ್ತೀರ್ಣ 1-96. 1-62. ಎಕ್ರೆ ಜಮೀನುಗಳು ದಿನಾಂಕ 17-10-2015 ರ ಪಾಲು ವಿಭಾಗದ ಪತ್ರ ಪ್ರಕಾರ ಅರ್ಜಿದಾರರಾದ ಎ.ನಾಗಪ್ಪ ತಂದೆ ಲೇಟ್ ಅಡ್ಡೇಪ್ಪರ ನಾಗಪ್ಪ ಇವರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ. ಹಾಗೂ ಮುದ್ರಾಂಕ ಶುಲ್ಕ ಪಾವತಿಸಲು ಸಹಾ ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 09-08-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪ ತಹಶೀಲ್ದಾರರು
ನಾಡಕಛೇರಿ ಕೊಟ್ಟೂರು

ಇದರ ಪ್ರತಿಯನ್ನು:

1) ಅರ್ಜಿದಾರರಾದ ಎ.ನಾಗಪ್ಪ ತಂದೆ ಅಡ್ಡೇಪ್ಪರ ನಾಗಪ್ಪ. ಎ.ತಿಪ್ಪಣ್ಣ ತಂದೆ ಎ.ನಾಗಪ್ಪ. ಕಾಳಾಪುರ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಕೊಟ್ಟೂರು ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.